## ಕರ್ನಾಟಕ ಸರ್ಕಾರ

ನಂ.ಗ್ರಾಅಪ/1031/ಗ್ರಾಪಂಅ/2015

ಕರ್ನಾಟಕ ಸರ್ಕಾರದ ಸಚಿವಾಲಯ
ಬಹುಮಹಡಿ ಕಟ್ಟಡ
ಬೆಂಗಳೂರು, ದಿನಾಂಕ:25-1-2017.

### ಸುತ್ತೋಲೆ

ವಿಷಯ: ಗ್ರಾಮ ಪಂಚಾಯತಿಗಳು ತೆರಿಗೆಗಳು, ದರಗಳು ಮತ್ತು ಶುಲ್ಕಗಳನ್ನು ವಿಧಿಸಿ, ವಸೂಲಿ ಮಾಡಲು ಹಾಗೂ ಪರಿಷ್ಕರಿಸಲು ಮತ್ತು ತಪ್ಪಿತಸ್ಥರಿಗೆ ಬೇಡಿಕೆ ನೋಟೀಸುಗಳನ್ನು ನೀಡಿ ದಂಡ ವಿಧಿಸಿ ವಸೂಲಿ ಮಾಡಲು ಹಾಗೂ ಮರಳು ಗಣಿಗಾರಿಕೆಗೆ ಸಂಬಂಧಿಸಿದ ರಾಜಧನವನ್ನು ಪಡೆಯಲು ಹಾಗೂ ಆಡಿಟ್ ಪ್ಯಾರಾಗಳಿಗೆ ಸಂಬಂಧಿಸಿದಂತೆ ಕ್ರಮ ಕೈಗೊಳ್ಳುವ ಬಗ್ಗೆ.

ಉಲ್ಲೇಖ:
1. ಸರ್ಕಾರದ ಅಧಿಸೂಚನೆ ಸಂಖ್ಯೆ: ಸಂವ್ಯಶಾಇ 45 ಶಾಸನ 2015, ದಿನಾಂಕ:31-12-2015.
2. ಸರ್ಕಾರದ ಪತ್ರ ಸಂಖ್ಯೆ: ಗ್ರಾಅಪ 09 ಗ್ರಾಪಂಅ 2016 ದಿನಾಂಕ:25-02-2016.
3. ಸರ್ಕಾರದ ಸುತ್ತೋಲೆ-1 ಸಂಖ್ಯೆ: ಗ್ರಾಅಪ 09 ಗ್ರಾಪಂಅ 2016 ದಿನಾಂಕ:16-04-2016.
4. ದಿನಾಂಕ:31-03-2014 ರ ಅಂತ್ಯಕ್ಕೆ ಭಾರತದ ಲೆಕ್ಕ ನಿಯಂತ್ರಕರು ಮತ್ತು ಮಹಾಲೆಕ್ಕಪರಿಶೋಧಕರ ವರದಿ.

*****

ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ನ್ನು ಜಾರಿಗೊಳಿಸುವ ಮೂಲಕ ಹಾಗೂ ವಿಕೇಂದ್ರಿಕರಣದ ತತ್ವಕ್ಕನುಸಾರವಾಗಿ ರಾಜ್ಯದ ಮೂರು ಹಂತದ ಪಂಚಾಯತ್ ರಾಜ್ ಸಂಸ್ಥೆಗಳಿಗೆ ಅನುದಾನ, ಪ್ರಕಾರ್ಯಗಳು ಹಾಗೂ ಸಿಬ್ಬಂದಿಗಳನ್ನು ಹಸ್ತಾಂತರಿಸಲಾಗಿದೆ. ಆಯಾ ಪ್ರಕಾರ್ಯಗಳನ್ನು ಆಯಾ ಹಂತಗಳಲ್ಲಿಯೇ ಅನುಷ್ಠಾನಗೊಳಿಸಲು ಅನುವಾಗುವಂತೆ ಕೇಂದ್ರ ಮತ್ತು ರಾಜ್ಯ ಸರ್ಕಾರಗಳ ಎಲಾ ಯೋಜನೆಗಳನ್ನು ಗ್ರಾಮ ಪಂಚಾಯತಿಯಿಂದ ಅನುಷ್ಠಾನಗೊಳಿಸುವ ಜವಾಬ್ದಾರಿಯನ್ನು ವಹಿಸಿದ್ದು, ಅದರಂತೆ ಪ್ರತಿ ಯೋಜನೆಯ ಅನುದಾನವನ್ನು ನೇರವಾಗಿ ಗ್ರಾಮ ಪಂಚಾಯತಿಗೆ ಬಿಡುಗಡೆ ಮಾಡಲಾಗುತ್ತಿದೆ. ಇದರಿಂದಾಗಿ ಗ್ರಾಮ ಪಂಚಾಯತಿಗಳು ಪರಿಣಾಮಕಾರಿಯಾಗಿ ಸ್ಥಳೀಯ ಸರ್ಕಾರದಂತೆ ಕಾರ್ಯನಿರ್ವಹಿಸಬೇಕಾಗಿದ್ದು, ಅವುಗಳ ಜವಾಬ್ದಾರಿ ಮತ್ತು ಕರ್ತವ್ಯಗಳು ಹೆಚ್ಚಾಗಿವೆ.

ಸದರಿ ಅಧಿನಿಯಮದ ಪ್ರಕರಣ 199 ರಲ್ಲಿ ಗ್ರಾಮ ಪಂಚಾಯತಿಗಳು ಪಂಚಾಯತಿ ಪ್ರದೇಶದ ಪರಿಮಿತಿಗೊಳಗಿರುವ **ಕೃಷಿ ತೆರಿಗೆ ನಿರ್ಧರಣೆಗೆ ಒಳಪಟ್ಟಿರದ ಕಟ್ಟಡಗಳು ಮತ್ತು ಭೂಮಿಗಳ ಮೇಲೆ ಸ್ವತ್ತಿನ ಬಂಡವಾಳ ಮೌಲ್ಯದ ಆಧಾರದಲ್ಲಿ** ಹಾಗೂ ಗ್ರಾಮ ಪಂಚಾಯತಿಯು ಕುಡಿಯುವುದಕ್ಕೆ ಮತ್ತು ಇತರ ಉದ್ದೇಶಗಳಿಗಾಗಿ ನೀರು ಸರಬರಾಜು ಮಾಡಲು ತೆರಿಗೆ ವಿಧಿಸಲು ಅವಕಾಶ ಕಲ್ಪಿಸಲಾಗಿದೆ. ಪ್ರರಕಣ 199 ರಂತೆ ಗ್ರಾಮ ಪಂಚಾಯತಿಗಳು ತೆರಿಗೆ ಮತ್ತು ಶುಲ್ಕವನ್ನು ಅನುಸೂಚಿ-IV ರಲ್ಲಿ ನಿರ್ದಿಷ್ಟಪಡಿಸಿರುವಂತೆ ಹಾಗೂ ನಿಯಮಿಸಬಹುದಾದಂತ ಯಾವುದೇ ಇತರೆ ಶುಲ್ಕವನ್ನು ವಿಧಿಸಿ, ವಸೂಲಿ ಮಾಡಬಹುದಾಗಿದೆ.

ಸದರಿ ಅಧಿನಿಯಮದ ಪ್ರಕರಣ 199 ಎ ರನ್ವಯ ಗ್ರಾಮ ಪಂಚಾಯತಿಯು 199ನೇ ಪ್ರಕರಣದ ಅಡಿಯಲ್ಲಿ ವಿಧಿಸಬಹುದಾದ ತೆರಿಗೆಗಳು ಮತ್ತು ದರಗಳನ್ನು, ಕಟ್ಟಡಗಳು ಮತ್ತು ಕೃಷಿಯೇತರ ಭೂಮಿಯ ಸಂಬಂಧದಲ್ಲಿ ಕನಿಷ್ಠ 2 ವರ್ಷಗಳಿಗೊಮ್ಮೆ ಮತ್ತು ಅನುಸೂಚಿ-IV ರಲ್ಲಿ ನಿರ್ದಿಷ್ಟಪಡಿಸಿದ ಇತರ ಬಾಬ್ತುಗಳ ಮೇಲೆ ವರ್ಷದಲ್ಲಿ ಕನಿಷ್ಠ ಒಮ್ಮೆ ಪರಿಷ್ಕರಿಸತಕ್ಕದ್ದು, **ಸದರಿ ಅಧಿನಿಯಮದ ಪ್ರಕರಣ 200 ರನ್ವಯ ಬಾಕಿಗಳನ್ನು ಹೊರತುಪಡಿಸಿ ಗ್ರಾಮ ಪಂಚಾಯತಿಗೆ ಸಲ್ಲಿಕೆಯಾಗಬೇಕಾಗಿರುವ ತೆರಿಗೆಗಳು ವಸೂಲಿ ಮಾಡುವುದು ಗ್ರಾಮ ಪಂಚಾಯತಿಗಳ ಪ್ರಾಥಮಿಕ ಹೊಣೆಗಾರಿಕೆಯಾಗಿರುತ್ತದೆ ಮತ್ತು ವಸೂಲು ಆಗಬೇಕಾಗಿರುವ ತೆರಿಗೆಯಲ್ಲಿ ಶೇ 80 ರಷ್ಟು ಕಡಿಮೆ ವಸೂಲಾತಿಯಾಗಿದ್ದರೆ ಹಾಗೆ ಕಡಿಮೆ ವಸೂಲಾತಿಯಾಗಿರುವುದಕ್ಕೆ ಕಾರಣಗಳ ಬಗ್ಗೆ ಗ್ರಾಮ ಪಂಚಾಯುತ್ ತನಿಖೆ ಮಾಡಿ ಅವಶ್ಯಕ ಕ್ರಮ ತೆಗೆದುಕೊಳ್ಳತಕ್ಕದೆಂದೂ ಸೂಚಿಸಿದೆ.**

ಗ್ರಾಮ ಪಂಚಾಯತಿಗಳು ತೆರಿಗೆಗಳನ್ನು ವಿಧಿಸುವ, ಪರಿಷ್ಕರಿಸುವ ಹಾಗೂ ದರಗಳು ಮತ್ತು ಶುಲ್ಕವನ್ನು ವಿಧಿಸುವ ಬಗ್ಗೆ ಎಲ್ಲಾ ಸೂಚನೆಗಳನ್ನು ಕಟ್ಟುನಿಟ್ಟಾಗಿ ಪಾಲಿಸುವಂತೆ ಎಲ್ಲಾ ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ಉಲ್ಲೇಖ (3) ರ ಸರ್ಕಾರದ ಸುತ್ತೋಲೆಯಲ್ಲಿ ತಿಳಿಸಲಾಗಿತ್ತು.

ಉಲ್ಲೇಖ(4) ರ ದಿನಾಂಕ:31-03-2014 ಕ್ಕೆ ಅಂತ್ಯಗೊಂಡ ಸಿ& ಎಜಿ ರವರ ಸ್ಥಳೀಯ ಸಂಸ್ಥೆಗಳ ವರದಿಯಲ್ಲಿ ಕರ್ನಾಟಕ ರಾಜ್ಯದಲ್ಲಿ, ಗ್ರಾಮ ಪಂಚಾಯತಿಗಳು ಸ್ವಯಂ-ಸರ್ಕಾರವಾಗಿ ಕಾರ್ಯನಿರ್ವಹಿಸುತ್ತವೆ. ಪೂರ್ವಭಾವಿ ಯೋಜನೆಯನ್ನು ಸಿದ್ಧಪಡಿಸಲು ಮತ್ತು ಆರ್ಥಿಕ ಅಭಿವೃದ್ಧಿ ಹಾಗೂ ಸಾಮಾಜಿಕ ನ್ಯಾಯಕ್ಕಾಗಿ ಯೋಜನೆಗಳನ್ನು ಕಾರ್ಯಗತಗೊಳಿಸುವಲ್ಲಿ ಅವುಗಳು ಜವಾಬ್ದಾರಿಯುತವಾಗಿರುತ್ತವೆ. ಗ್ರಾಮೀಣ ಪ್ರದೇಶಗಳಲ್ಲಿ ವಿವಿಧ ರೀತಿಯ ತೆರಿಗೆಗಳು, ದರಗಳು ಮತ್ತು ಫೀಜುಗಳನ್ನು ವಿಧಿಸಲು ಹಾಗೂ ವಸೂಲು ಮಾಡಲು ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993, ಕರ್ನಾಟಕ ಪಂಚಾಯತ್ ರಾಜ್ (ಗ್ರಾಮ ಪಂಚಾಯತಿಗಳ ತೆರಿಗೆಗಳು ಮತ್ತು ಶುಲ್ಕಗಳು) ನಿಯಮಗಳು, 1994 ಹಾಗೂ ಕರ್ನಾಟಕ ಪಂಚಾಯತ್ ರಾಜ್ (ಗ್ರಾಮ ಪಂಚಾಯತಿಗಳ ಆಯವ್ಯಯ ಮತ್ತು ಲೆಕ್ಕಪತ್ರಗಳು) ನಿಯಮಗಳು, 2006, ಇವುಗಳ ಅಡಿಯಲ್ಲಿ ಗ್ರಾಮ ಪಂಚಾಯತಿಗಳಿಗೆ ಅಧಿಕಾರಗಳನ್ನು ನೀಡಲಾಗಿದೆ. ಆಸ್ತಿ ತೆರಿಗೆಯನ್ನು ವಿಧಿಸುವ ಮತ್ತು ವಸೂಲು ಮಾಡುವ ಹಾಗೂ ಮರಳು ಗಣಿಗಾರಿಕೆಯಿಂದ ರಾಜಧನದ ಪಾಲಿನ ಸ್ವೀಕೃತಿಯ ಕಾರ್ಯವಿಧಾನದ ಅನುಸರಣಾ ಕ್ರಮಗಳನ್ನು ಖಚಿತಪಡಿಸಿಕೊಳ್ಳುವ ಉದ್ದೇಶದಿಂದ, 80 ಗ್ರಾಮ ಪಂಚಾಯತಿಗಳ 2009-10ರಿಂದ 2013-14ರ ಅವಧಿಯ ದಾಖಲೆಗಳನ್ನು ಪರೀಕ್ಷಾ-ಪರಿಶೀಲನೆ ಮಾಡುವ ಮೂಲಕ ಲೆಕ್ಕಪರಿಶೋಧನೆಯನ್ನು ನಡೆಸಲಾಗಿದ್ದು, ಪರೀಕ್ಷಾ-ಪರಿಶೀಲನೆ ಮಾಡಲಾದ ಬೆಂಗಳೂರು ನಗರ, ಚಿತ್ರದುರ್ಗ, ದಾವಣಗೆರೆ, ಗದಗ, ಕೊಡಗು, ಕೊಪ್ಪಳ, ಮಂಡ್ಯ ಮತ್ತು ಉತ್ತರ ಕನ್ನಡ ಜಿಲ್ಲೆಯ ಗ್ರಾಮ ಪಂಚಾಯತಿಗಳ ಬಗ್ಗೆ ಸಿ& ಎಜಿ ವರದಿಯಲ್ಲಿ ಈ ಕೆಳಕಂಡ ಅಂಶಗಳ ಬಗ್ಗೆ ಆಕ್ಷೇಪಿಸಲಾಗಿದೆ.

- ಕೈಗಾರಿಕೆಗಳಿಗೆ ವಾಸದ ಮನೆಗಳಿಗಿಂತ ಕಡಿಮೆ ತೆರಿಗೆ ನಿಗದಿಪಡಿಸಿ ವರಮಾನದ ನಷ್ಟ ಸಂಭವಿರಿಸುವ ಬಗ್ಗೆ.
- ಬಾಡಿಗೆ ಒಡಂಬಡಿಕೆಗಳಿಗೆ ಸಂಬಂಧಿಸಿದಂತೆ ಒಡಂಬಡಿಕೆಗಳನ್ನು ನವೀಕರಿಸಲಾಗಲಿ ನಿಯತಕಾಲಿಕವಾಗಿ ಬಾಡಿಗೆಯನ್ನು ಪರಿಷ್ಕರಿಸದಿರುವುದರಿಂದ ವರಮಾನದ ನಷ್ಟ ಸಂಭವಿರಿಸುವ ಬಗ್ಗೆ.
- ಆಸ್ತಿ ತೆರಿಗೆಯನ್ನು ವಸೂಲಿ ಮಾಡದಿರುವ ಬಗ್ಗೆ.
- ಕೇಂದ್ರ / ರಾಜ್ಯ ಸರ್ಕಾರಿ ಸ್ವಾಮ್ಯದ ಕಂಪನಿಗಳ ಆಸ್ತಿಗಳನ್ನು ತೆರಿಗೆ ನಿರ್ಧರಣೆಗೆ ಒಳಪಡಿಸದಿರುವುದರಿಂದ ವರಮಾನದ ನಷ್ಟ ಸಂಭವಿಸಿರುವ ಬಗ್ಗೆ.
- ಆಸ್ತಿಗಳ ಸಂಖ್ಯೆಯಲ್ಲಿ ಹೆಚ್ಚಳಗೊಂಡಿದ್ದ ಹೊರತಾಗಿಯು 2012-13 ಮತ್ತು 2013-14ನೇ ಸಾಲಿನ ಆಸ್ತಿ ತೆರಿಗೆ ಪಾವತಿಗಾಗಿನ ಬೇಡಿಕೆಯು ಒಂದೇ ಸಮನಾಗಿರುವುದು.
- ಆಸ್ತಿಗಳ ಸಂಖ್ಯೆಯಲ್ಲಿ ಹೆಚ್ಚಳಗೊಂಡಿದ್ದ ಹೊರತಾಗಿಯೂ 2012-13 ರ ಆಸ್ತಿ ತೆರಿಗೆ ಬೇಡಿಕೆಯು 2011-12ರ ಬೇಡಿಕೆಗಿಂತ ಕಡಿಮೆಯಾಗಿದ್ದ ಗ್ರಾಮ ಪಂಚಾಯತಿಗಳ ಬಗ್ಗೆ.
- ತಪ್ಪಿತಸ್ಥರಿಗೆ ಬೇಡಿಕೆ ನೋಟೀಸುಗಳನ್ನು ನೀಡದೆ ಹಾಗೂ ದಂಡವನ್ನು ವಿಧಿಸದೆ ಆಸ್ತಿ ತೆರಿಗೆಯನ್ನು ವಸೂಲಿ ಮಾಡದಿರುವ ಬಗ್ಗೆ.
- ಮರಳು ಗಣಿಗಾರಿಕೆಗೆ ಸಂಬಂಧಿತ ರಾಜಧನದ ಪಾಲನ್ನು ಗ್ರಾಮ ಪಂಚಾಯತಿಗಳಿಗೆ ಕಡಿಮೆ ಪ್ರಮಾಣದಲ್ಲಿ ವರ್ಗಾವಣೆ ಮಾಡಿರುವ ಬಗ್ಗೆ.

ಸಿ ಮತ್ತು ಎಜಿ ರವರ ವರದಿಯಂತೆ ಕ್ರಮ ಕೈಗೊಳ್ಳುವಂತೆ ಸಂಬಂಧಿಸಿದ ಜಿಲ್ಲಾ ಪಂಚಾಯತಿಗಳಿಗೆ ಸರ್ಕಾರದ ಪತ್ರದಲ್ಲಿ ತಿಳಿಸಲಾಗಿತ್ತು. ಹಾಗೂ ಸಿ&ಎಜಿ ರವರ ವರದಿಯನ್ನು ಜಿಲ್ಲಾ ಪಂಚಾಯತಿ ಕಛೇರಿಗೆ ಮಹಾಲೇಖಪಾಲರ ಕಛೇರಿಯಿಂದಲೂ ಕಳುಹಿಸಲಾಗಿದೆ. ಆದರೆ ಇದುವರೆವಿಗೂ ಜಿಲ್ಲಾ ಪಂಚಾಯಿತಿ ವತಿಯಿಂದ ಯಾವುದೇ ಕ್ರಮ ಕೈಗೊಂಡು ಸರ್ಕಾರಕ್ಕೆ ವರದಿ ಮಾಡಿರುವುದಿಲ್ಲ.

ದಿನಾಂಕ:20-10-2016 ರಂದು ನಡೆದ ಕರ್ನಾಟಕ ವಿಧಾನ ಮಂಡಲದ ಸ್ಥಳೀಯ ಸಂಸ್ಥೆಗಳ ಮತ್ತು ಪಂಚಾಯತ್ ರಾಜ್ ಸಂಸ್ಥೆಗಳ ಸಮಿತಿ ಸಭೆಯಲ್ಲಿ ಈ ಬಗ್ಗೆ ಪರಿಶೀಲನೆ ನಡೆಸಿ ಇದುವರೆವಿಗೂ ಕ್ರಮ ಕೈಗೊಂಡು ಸಮಿತಿಗೆ ವರದಿ ನೀಡದಿರುವ ಬಗ್ಗೆ ತೀವ್ರತರವಾದ ಅಸಮಾಧಾನವನ್ನು ವ್ಯಕ್ತಪಡಿಸಿರುತ್ತದೆ ಹಾಗೂ ಕ್ರಮ ಕೈಗೊಳ್ಳದಿರುವುದಕ್ಕೆ ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ರವರನ್ನು ಜವಾಬ್ದಾರರನ್ನಾಗಿ ಮಾಡಬೇಕಾಗಿ ಸಮಿತಿಯು ಭಾವಿಸಿದೆ.

**ಆದುದರಿಂದ ರಾಜ್ಯದ ಎಲ್ಲಾ ಗ್ರಾಮ ಪಂಚಾಯತಿಗಳ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು ಈ ಕೆಳಕಂಡಂತೆ ಕ್ರಮ ವಹಿಸುವಂತೆ ಮತ್ತೊಮ್ಮೆ ಸೂಚಿಸಿದೆ.**

1. ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 199, 199-ಎ ಮತ್ತು ಅನುಸೂಚಿ-IV ರಲ್ಲಿ ನಿರ್ದಿಷ್ಟಪಡಿಸಿದಂತೆ ಗ್ರಾಮ ಪಂಚಾಯತಿಗಳು ತೆರಿಗೆಗಳು, ದರಗಳು ಮತ್ತು ಶುಲ್ಕಗಳನ್ನು ವಿಧಿಸಲು, ವಸೂಲಿ ಮಾಡಲು ಮತ್ತು ಪರಿಷ್ಕರಿಸಲು ಕ್ರಮ ಕೈಗೊಳ್ಳತಕ್ಕದ್ದು.
2. ಸದರಿ ಅಧಿನಿಯಮದ ಪ್ರಕರಣ 200 ರನ್ವಯ ಬಾಕಿಗಳನ್ನು ಹೊರತುಪಡಿಸಿ ಗ್ರಾಮ ಪಂಚಾಯತಿಗೆ ಸಲ್ಲಿಕೆಯಾಗಬೇಕಾಗಿರುವ ತೆರಿಗೆಗಳು ವಸೂಲಿ ಮಾಡುವುದು ಗ್ರಾಮ ಪಂಚಾಯತಿಗಳ ಪ್ರಾಥಮಿಕ ಹೊಣೆಗಾರಿಕೆಯಾಗಿರುತ್ತದೆ ಮತ್ತು ವಸೂಲು ಆಗಬೇಕಾಗಿರುವ ತೆರಿಗೆಯಲ್ಲಿ ಶೇ 80 ರಷ್ಟು ಕಡಿಮೆ ವಸೂಲಾತಿಯಾಗಿದ್ದರೆ ಹಾಗೆ ಕಡಿಮೆ ವಸೂಲಾತಿಯಾಗಿರುವುದಕ್ಕೆ ಕಾರಣಗಳ ಬಗ್ಗೆ ಗ್ರಾಮ ಪಂಚಾಯತ್ ತನಿಖೆ ಮಾಡಿ ಅವಶ್ಯಕ ಕ್ರಮ ತೆಗೆದುಕೊಳ್ಳತಕ್ಕದ್ದು.
3. ಬಾಡಿಗೆ ಒಡಂಬಡಿಕೆಗಳಿಗೆ ಸಂಬಂಧಿಸಿದಂತೆ ನಿಯಮಾನುಸಾರ ಒಡಂಬಡಿಕೆಗಳನ್ನು ನವೀಕರಿಸುವುದು ಮತ್ತು ನಿಯತಕಾಲಿಕವಾಗಿ ಬಾಡಿಗೆಯನ್ನು ಪರಿಷ್ಕರಿಸಲು ಕ್ರಮ ಕೈಗೊಳ್ಳತಕ್ಕದ್ದು.
4. ಕೇಂದ್ರ / ರಾಜ್ಯ ಸರ್ಕಾರಿ ಸ್ವಾಮ್ಯದ ಕಂಪನಿಗಳ ಆಸ್ತಿಗಳನ್ನು ಕಡ್ಡಾಯವಾಗಿ ತೆರಿಗೆ ನಿರ್ಧರಣೆಗೆ ಒಳಪಡಿಸತಕ್ಕದ್ದು.
5. ಆಸ್ತಿಗಳ ಸಂಖ್ಯೆಯಲ್ಲಿ ಹೆಚ್ಚಳಗೊಂಡಂತೆ ಆಸ್ತಿ ತೆರಿಗೆ ಪಾವತಿಗಾಗಿನ ಬೇಡಿಕೆಯು ಹೆಚ್ಚಳವಾಗಿರತಕ್ಕದ್ದು.
6. ತಪ್ಪಿತಸ್ಥರಿಗೆ ಬೇಡಿಕೆ ನೋಟೀಸುಗಳನ್ನು ನೀಡುವುದು ಹಾಗೂ ದಂಡವನ್ನು ವಿಧಿಸಿ ಆಸ್ತಿ ತೆರಿಗೆಯನ್ನು ವಸೂಲಿ ಮಾಡತಕ್ಕದ್ದು.
7. ಮರಳು ಗಣಿಗಾರಿಕೆಗೆ ಸಂಬಂಧಿತ ರಾಜಧನದ ಪಾಲನ್ನು ಗ್ರಾಮ ಪಂಚಾಯತಿಗಳು ಸಂಬಂಧಿಸಿದ ಇಲಾಖೆಗಳಿಂದ ವರ್ಗಾವಣೆ ಮಾಡಿಸಿಕೊಳ್ಳಲು ಕ್ರಮವಹಿಸತಕ್ಕದ್ದು.

ಮೇಲ್ಕಂಡಂತೆ ಗ್ರಾಮ ಪಂಚಾಯತಿಗಳು ಕ್ರಮ ವಹಿಸಿರುವ ಬಗ್ಗೆ ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಮತ್ತು ತಾಲ್ಲೂಕು ಪಂಚಾಯತಿಯ ಕಾರ್ಯನಿರ್ವಾಹಕ ಅಧಿಕಾರಿಗಳು ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 232 ರಂತೆ ಪರಿವೀಕ್ಷಣೆ ಮತ್ತು ಮೇಲ್ವಿಚಾರಣೆ ಮಾಡತಕ್ಕದ್ದೆಂದೂ ತಿಳಿಸಿದೆ.

ಭಾರತದ ಲೆಕ್ಕ ನಿಯಂತ್ರಕರು ಮತ್ತು ಮಹಾಲೆಕ್ಕಪರಿಶೋಧಕರ ವರದಿಯಲ್ಲಿನ ಆಡಿಟ್ ಪ್ಯಾರಾಗಳಿಗೆ ಸಂಬಂಧಿಸಿದಂತೆ ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಮತ್ತು ತಾಲ್ಲೂಕು ಪಂಚಾಯತಿಯ ಕಾರ್ಯನಿರ್ವಾಹಕ ಅಧಿಕಾರಿಗಳು ಕ್ರಮ ಕೈಗೊಂಡು ಸರ್ಕಾರಕ್ಕೆ ವರದಿ ಸಲ್ಲಿಸಲು ಕ್ರಮ ವಹಿಸತಕ್ಕದ್ದೆಂದೂ ಸಹ ಸೂಚಿಸಿದೆ.

(ಎಂ.ಕೆ. ಕೆಂಪೇಗೌಡ)
ನಿರ್ದೇಶಕರು (ಪಂ.ರಾಜ್) ಹಾಗೂ
ಪದನಿಮಿತ್ತ ಸರ್ಕಾರದ ಉಪ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಗೆ:

1) ಎಲ್ಲಾ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್‌ಗಳು,
2) ಎಲ್ಲಾ ಕಾರ್ಯನಿರ್ವಾಹಕ ಅಧಿಕಾರಿಗಳು, ತಾಲ್ಲೂಕು ಪಂಚಾಯತ್‌ಗಳು.
3) ಎಲ್ಲಾ ಗ್ರಾಮ ಪಂಚಾಯತಿಗಳ ಅಧ್ಯಕ್ಷರು/ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು.

ಪ್ರತಿ:

1) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿಯವರು.
2) ಸರ್ಕಾರದ ಪ್ರಧಾನ ಕಾರ್ಯದರ್ಶಿ (ಪಂ.ರಾಜ್) ರವರ ಆಪ್ತ ಕಾರ್ಯದರ್ಶಿಯವರಿಗೆ.
3) ಸಂಪಾದಕರು, ಕರ್ನಾಟಕ ವಿಕಾಸ ಪತ್ರಿಕೆ/ವೆಬ್‌ಸೈಟ್, ಗ್ರಾ.ಅ ಮತ್ತು ಪಂ.ರಾಜ್ ಇಲಾಖೆ.
4) ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿ.